ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : https://kptcl.karnataka.gov.in

ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಅಧಿಕೃತ ಸಂಖ್ಯೆ (ಸಿಐಎನ್): ಉ40109ಕೆಎ1999ಎಸ್‌ಜಿಸಿ025521
(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಇ 1 ಸೇವಿಸೇ 2011, ದಿನಾಂಕ: 29.06.2011.
2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97, ದಿನಾಂಕ: 10.04.2018.
3. ಸರ್ಕಾರದ ಆದೇಶ ಸಂಖ್ಯೆ: ಆಇ 4(ಇ) ಸೇವಿಸೇ 2021, ದಿನಾಂಕ: 21.06.2021.

**ಪೀಠಿಕೆ:**

ಸರ್ಕಾರದ ಆದೇಶ ಸಂಖ್ಯೆ: ಆಇ 1 ಸೇವಿಸೇ 2011, ದಿನಾಂಕ: 29.06.2011 ನ್ನು ನಿಗಮವು ಅಳವಡಿಸಿಕೊಂಡು, ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97, ದಿನಾಂಕ: 10.04.2018 ರಲ್ಲಿ ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ನಿಗಮದ ಮಹಿಳಾ ನೌಕರರಿಗೆ **'ಒಂದು ವರ್ಷದಲ್ಲಿ ಮೂರು ಕಂತುಗಳಿಗೆ ಮೀರದಂತೆ ಹಾಗೂ 15 ದಿನಗಳಿಗೆ ಕಡಿಮೆ ಇಲ್ಲದಂತೆ, ಇಡೀ ಸೇವಾವಧಿಯಲ್ಲಿ ಎರಡು ವರ್ಷಗಳ ಅವಧಿಗೆ ಅಂದರೆ ಒಟ್ಟು 730 ದಿನಗಳ ಶಿಶುಪಾಲನಾ ರಜೆ'**ಯನ್ನು ಮಂಜೂರು ಮಾಡಲಾಗಿರುತ್ತದೆ.

ಪ್ರಸ್ತುತ ಸರ್ಕಾರವು 2021-22 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-37 ರಲ್ಲಿ ರಾಜ್ಯ ಸರ್ಕಾರದ ಮಹಿಳಾ ನೌಕರರಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಘೋಷಿಸಿರುವುದನ್ನು, ಆದೇಶ ಸಂಖ್ಯೆ: ಆಇ 4(ಇ) ಸೇವಿಸೇ 2021, ದಿನಾಂಕ: 21.06.2021 ರಲ್ಲಿ ಅಳವಡಿಸಿಕೊಂಡಿರುತ್ತದೆ.

ರಾಜ್ಯ ಸರ್ಕಾರದ ದಿನಾಂಕ: 21.06.2021 ರ ಆದೇಶವನ್ನು ನಿಗಮದಲ್ಲಿ ಅಳವಡಿಸಿಕೊಂಡು ಈ ಕೆಳಕಂಡಂತೆ ಆದೇಶಿಸಲಾಗಿದೆ:

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97,**

**ಬೆಂಗಳೂರು, ದಿನಾಂಕ:** -5 JUL 2021

ನಿಗಮದ ಮಹಿಳಾ ನೌಕರರಿಗೆ ಈ ಕೆಳಕಂಡ ಷರತ್ತುಗಳ ಮೇರೆಗೆ ಇಡೀ ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ ಅಂದರೆ 180 ದಿನಗಳ 'ಶಿಶುಪಾಲನಾ ರಜೆ'ಯನ್ನು, ರಜೆಯನ್ನು ಮಂಜೂರು ಮಾಡುವ ಸಕ್ಷಮ ಪ್ರಾಧಿಕಾರವು ಮಂಜೂರು ಮಾಡತಕ್ಕದ್ದು:-

i) ನಿಗಮದ ಮಹಿಳಾ ನೌಕರಳು ಹೊಂದಿರುವ ಮಕ್ಕಳ ಸಂಖ್ಯೆಯನ್ನು ಪರಿಗಣಿಸದೆ, ಅತ್ಯಂತ ಕಿರಿಯ ಮಗುವು 18 ವರ್ಷ ತಲುಪುವವರೆಗಿನ ಅವಧಿಗೆ ಮಾತ್ರ ಈ ರಜೆಯ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದು.

ii) ಈ ರಜೆಯ ಅವಧಿಯಲ್ಲಿ ಅವಳು ರಜೆಯ ಮೇಲೆ ಹೋಗುವ ನಿಕಟ ಪೂರ್ವದಲ್ಲಿ ಪಡೆಯಲರ್ಹವಿರುವ ಸಂಪೂರ್ಣ ವೇತನಕ್ಕೆ ಸಮನಾದ ರಜೆ ಸಂಬಳಕ್ಕೆ ಅರ್ಹರಾಗತಕ್ಕದ್ದು.

iii) ಪ್ರತಿ ಬಾರಿಯು ಈ ರಜೆ ಮಂಜೂರಾತಿಯು ಕನಿಷ್ಟ 15 ದಿನಗಳಿಗಿಂತ ಕಡಿಮೆ ಇರಬಾರದು.

iv) ನಿಗಮದ ಮಹಿಳಾ ನೌಕರಳು ಈ ರಜೆಯನ್ನು ಸಾಂದರ್ಭಿಕ ರಜೆಯ ಹೊರತಾಗಿ, ನಿಯಮಾನುಸಾರ ಪಡೆಯಲರ್ಹವಿರುವ ಅಸಾಧಾರಣ ರಜೆಯೂ ಒಳಗೊಂಡಂತೆ, ಇತರೆ ರಜೆಯೊಂದಿಗೆ ಸಂಯೋಜಿಸಿ ಪಡೆಯಬಹುದು.

v) ಈ ರಜೆಯನ್ನು ಯಾವುದೇ ರಜೆ ಲೆಕ್ಕದಿಂದ ಕಳೆಯತಕ್ಕದ್ದಲ್ಲ.

vi) ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ನಿಗಮದ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 ದಿನಗಳ ಶಿಶುಪಾಲನಾ ರಜೆ ಸೌಲಭ್ಯಕ್ಕೆ ಅರ್ಹರಾದ ಯಾವುದೇ ನೌಕರಳು ಆ ಯೋಜನೆಯನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು. ಅದರೊಂದಿಗೆ ಈ ಯೋಜನೆಯಡಿಯಲ್ಲಿನ ಸೌಲಭ್ಯಕ್ಕೂ ಅರ್ಹರಾಗತಕ್ಕದ್ದಲ್ಲ.

vii) ಶಿಶುಪಾಲನಾ ರಜೆಯ ಮಂಜೂರಾತಿಗಾಗಿ ಯಾವುದೇ ಪೂರಕ ದಾಖಲೆಗಳನ್ನು ಪಡೆಯುವ ಅವಶ್ಯಕತೆ ಇರುವುದಿಲ್ಲ. ಸೇವಾ ಪುಸ್ತಕದಲ್ಲಿ ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ಮಂಜೂರು ಮಾಡತಕ್ಕದ್ದು.

viii) ಈ ಪೂರ್ವದಲ್ಲಿ ಮಂಜೂರಾಗಿರುವ ಯಾವುದೇ ಬಗೆಯ ರಜೆಯನ್ನು ಶಿಶುಪಾಲನಾ ರಜೆಯಾಗಿ ಪರಿವರ್ತಿಸತಕ್ಕದ್ದಲ್ಲ. ಈ ಆದೇಶವಡಿಯಲ್ಲಿನ ಸೌಲಭ್ಯವು ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೊಳ್ಳತಕ್ಕದ್ದು.

ix) ಈ ರಜೆಯನ್ನು ಮಂಜೂರು ಮಾಡುವ ಸಕ್ಷಮವಾದ ಪ್ರಾಧಿಕಾರವು ಶಿಶುಪಾಲನಾ ರಜೆಯ ಮಂಜೂರಾತಿಯನ್ನು ಸೇವಾ ಪುಸ್ತಕದಲ್ಲಿ ದಾಖಲು ಮಾಡುವುದು ಮತ್ತು ಈ ಕೆಳಕಂಡ ನಮೂನೆಯಲ್ಲಿ ಲೆಕ್ಕವಿಡಬೇಕು.

| ಕ್ರಮ ಸಂಖ್ಯೆ | ತೆಗೆದುಕೊಂಡ ಶಿಶುಪಾಲನಾ ರಜೆಯ ಅವಧಿ (Period of Leave taken for Child Care) | | ಬಾಕಿ ಉಳಿದಿರುವ ಶಿಶುಪಾಲನಾ ರಜೆ (Balance of Child Care Leave) | | ರಜೆ ಮಂಜೂರು ಮಾಡಿರುವ ಸಕ್ಷಮ ಪ್ರಾಧಿಕಾರಿಯ ಸಹಿ ಮತ್ತು ಮೊಹರು (Sign and seal of concerned Officer) |
|---|---|---|---|---|---|
| | ಇಂದ From | ಇಲ್ಲಿಯವರೆಗೆ To | ಬಾಕಿ Balance | ದಿನಾಂಕ Date | |
| 1 | | | | | |
| 2 | | | | | |
| 3 | | | | | |

ಈ ಬಗ್ಗೆ ಕವಿಮಂ ನೌಕರರ ಸೇವಾ ನಿಯಮಾವಳಿಗಳಿಗೆ ಸೂಕ್ತ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಮೆಮೋ**

ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/21-22/ ಆರ್‌-692 ದಿನಾಂಕ: 18 AUG 2021

ನಿಗಮದ ಮಹಿಳಾ ನೌಕರರಿಗೆ ಇಡೀ ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ ಅಂದರೆ 180 ದಿನಗಳ "ಶಿಶುಪಾಲನಾ ರಜೆ"ಯನ್ನು ಮಂಜೂರು ಕುರಿತು ನಿರ್ದೇಶಕರು(ಆ ಮತ್ತು ಮಾ.ಸಂ.), ಕವಿಪ್ರನಿನಿ., ಬೆಂಗಳೂರುರವರು ಹೊರಡಿಸಿರುವ ಆದೇಶ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ16/5411/96-97 ದಿನಾಂಕ:05.07.2021ರ ಆದೇಶವನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಮ.ಕ.